ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 21–09–2021

# ಮಾಧ್ಯಮ ಆಹ್ವಾನ
# Media Invitation

## 1. ಕಾನೂನು ಮಾಪನಶಾಸ್ತ್ರ ಇಲಾಖೆ ನೂತನವಾಗಿ ನಿರ್ಮಿಸಿರುವ "ಮಾಪನಸೌಧ" ಉದ್ಘಾಟನಾ ಸಮಾರಂಭ:

**ಉದ್ಘಾಟನೆ:**
**ಬಸವರಾಜ ಎಸ್ ಬೊಮ್ಮಾಯಿ**
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

**ಉಮೇಶ್ ವಿಶ್ವನಾಥ ಕತ್ತಿ**
ಮಾನ್ಯ ಅರಣ್ಯ, ಆಹಾರ ನಾಗರಿಕ ಸರಬರಾಜು ಇಲಾಖೆಯ ಸಚಿವರು, ಕರ್ನಾಟಕ ಸರ್ಕಾರ.

**ದಿನಾಂಕ: 22–09–2021, ಬುಧವಾರ, ಸಮಯ: ಬೆಳಿಗ್ಗೆ 9.30 ಗಂಟೆಗೆ**

**ಸ್ಥಳ: ಮಾಪನಶಾಸ್ತ್ರ ನಿಯಂತ್ರಕರ ಕಛೇರಿ, ನಂ.1 ಆಲಿ ಆಸ್ಕರ್ ರಸ್ತೆ ಆವರಣ (ಪೊಲೀಸ್ ಆಯುಕ್ತರ ಕಛೇರಿ ಹಿಂಭಾಗ), ಮಾಪನಸೌಧ, ಬೆಂಗಳೂರು.**

## 2. Exporters Conclave:

**Inauguration By:**
**Ms. Shobha Karandlaje,**
**Hon'ble Union Minister of State for Agriculture and Farmers Welfare, Government Of India.**

**Date: 22–09–2021, Wednesday, Time : 10.00 AM**
**Place: Hotel Lalit Ashok, Bangalore.**

# ಪತ್ರಿಕಾ ಪ್ರಕಟಣೆ

**PRESS RELEASE**

## ಎಲ್ಲಿ ನ್ಯಾಯ ಮತ್ತು ನೀತಿ ನೆಲೆಸಿರುತ್ತೋ ಅಲ್ಲಿ ಧರ್ಮವಿರುತ್ತದೆ

**– ಮುಖ್ಯಮಂತ್ರಿ ಬಸವರಾಜ ಎಸ್ ಬೊಮ್ಮಾಯಿ.**

ಬೆಂಗಳೂರು, ಸೆಪ್ಟೆಂಬರ್ 21, (ಕರ್ನಾಟಕ ವಾರ್ತೆ):

ನ್ಯಾಯ ಮತ್ತು ನೀತಿಯು ಎಲ್ಲಿ ಒಟ್ಟಾಗಿ ನೆಲೆಸಿರುವುದೋ ಅಲ್ಲಿ ಧರ್ಮದ ಸ್ಥಾಪನೆಯಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಎಸ್. ಬೊಮ್ಮಾಯಿ ತಿಳಿಸಿದರು.

ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಸ್ಕಾನ್ ಸಂಸ್ಥಾಪಕ ಆಚಾರ್ಯ ಭಕ್ತಿವೇದಾಂತ ಸ್ವಾಮಿ ಪ್ರಭುಪಾದರ 125ನೇ ಜನ್ಮದಿನಾಚರಣೆಯ ಸ್ಮರಣಾರ್ಥವಾಗಿ ಹೊರತಂದಿರುವ ನಾಣ್ಯ ಹಾಗೂ ಸಂಸದೀಯ ವ್ಯವಹಾರಗಳ ಮತ್ತು ಶಾಸನ ರಚನಾ ಇಲಾಖೆ ಮತ್ತು ಭಾಷಾಂತರ ನಿರ್ದೇಶನಾಲಯದಿಂದ ಹೊರತರಲಾದ ಕಾನೂನು ಪದಕೋಶ ಹಾಗೂ 15 ಕೇಂದ್ರ ಅಧಿನಿಯಮಗಳ ಪುಸ್ತಕ ಲೋಕಾರ್ಪಣೆ ಮಾಡಿ ಮಾತನಾಡಿದ ಮುಖ್ಯಮಂತ್ರಿಗಳು ಇಂದು ಒಮ್ಮೆಲೆ ಕಾನೂನು ಮತ್ತು ಧರ್ಮ ಒಂದೇ ಕಡೆ ಇದೇ ಎನ್ನುವುದಕ್ಕೆ ಈ ಸಮಾರಂಭವೇ ಸಾಕ್ಷಿ. ಒಂದೇ ವೇದಿಕೆಯಲ್ಲಿ ಒಂದು ಕಡೆ ಕಾನೂನು ಪದಕೋಶ ಬಿಡುಗಡೆ ಇನ್ನೊಂದೆಡೆ ಭಕ್ತಿವೇದಾಂತ ಸ್ವಾಮಿ ಪ್ರಭುಪಾದರ ಕೃಷ್ಣನ ನೆನಪು ಮಾಡಿಸುವ ಭಕ್ತಿ ಪ್ರಧಾನವನ್ನು ಸರಳವಾಗಿ ಬಿಂಬಿಸಲಾಗಿದೆ ಎಂದು ತಿಳಿಸಿದರು.

2003ರಲ್ಲಿ ಪ್ರಕಟವಾಗಿದ್ದ ಕಾನೂನು ಪದಕೋಶವು ನ್ಯಾಯಾಲಯಗಳಲ್ಲಿ ಕನ್ನಡವನ್ನು ಬಳಸಲು ಅತ್ಯಂತ ಉಪಯುಕ್ತವಾಗಿದೆಯೆಂದು ಹಾಗೂ ನ್ಯಾಯಾಲಯಗಳಲ್ಲಿ ಕನ್ನಡ ಬಳಸುವಾಗ ನ್ಯಾಯಾಧೀಶರಿಗೆ, ನ್ಯಾಯವಾದಿಗಳಿಗೆ ಹಾಗೂ ಅಲ್ಲಿನ ಆಡಳಿತ ಸಿಬ್ಬಂದಿಗೆ ಆ ಪದಕೋಶವನ್ನು ಬಿಟ್ಟರೆ ಬೇರೆ ಯಾವುದೇ ಪದಕೋಶ ಲಭ್ಯವಿರುವುದಿಲ್ಲವೆಂದು, ಸರ್ಕಾರಿ ಅಧಿಕಾರಿಗಳು, ನೌಕರರು, ನ್ಯಾಯವಾದಿಗಳು ಹಾಗೂ ಸಾರ್ವಜನಿಕರಿಂದ ಕಾನೂನು ಪದಕೋಶಕ್ಕೆ ಅಪಾರ ಬೇಡಿಕೆ ಬರುತ್ತಿರುವುದುದನ್ನು ಗಮನಿಸಿ ಇಂದು ಭಾಷಾಂತರ ಇಲಾಖೆಯ ಮುಖಾಂತರ ಕಾನೂನು ಪದಕೋಶವನ್ನು ಸಿದ್ದಪಡಿಸಿದೆ.

ಈ ಕೆಲಸದ ಹಿಂದೆ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪನವರ ಅಪಾರವಾದ ಕೊಡುಗೆ ಅಡಗಿದೆ. ಅಂದಿನ ಮುಖ್ಯಂತ್ರಿಗಳ ನಿರ್ದೇಶನದಂತೆ, ಇಂದು ಕಾನೂನು ಇಲಾಖೆ ಒಂದು ಉತ್ತಮವಾದ ಕೆಲಸವನ್ನು ಮಾಡಿದೆ. ಇದನ್ನು ಹೊರತರಲು ಶ್ರಮಿಸಿದ ಭಾಷಾಂತರ ಇಲಾಖೆಯ ಅಧಿಕಾರಿಗಳಿಗೆ ಕಾನೂನು ಇಲಾಖೆಯ ಅಧಿಕಾರಿಗಳಿಗೆ ಅಭಿನಂದನೆಗಳನ್ನು ಸಲ್ಲಿಸಿದರು.

ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಮಾತನಾಡುತ್ತಾ, ಆಚಾರ್ಯ ಭಕ್ತಿವೇದಾಂತ ಸ್ವಾಮಿ ಪ್ರಭುಪಾದರು ಜ್ಞಾನದ ಬೆಳಕನ್ನು ಇಡೀ ಜಗತ್ತಿಗೆ ಸಾರಿದ ಮಹಾನ್ ವ್ಯಕ್ತಿ. ಅವರ ಇಂದಿನ 12ನೇ ವರ್ಷದ ಸಂಭ್ರಮದ ಆಚರಣೆ ಸಂದರ್ಭದಲ್ಲಿ ನೆನಪಿಗಾಗಿ ನಾಣ್ಯ ಬಿಡುಗಡೆ ಮಾಡುತ್ತಿರುವುದು ನನಗೆ ತುಂಬಾ ಸಂತೋಷ ತಂದಿದೆ ಎಂದು ತಿಳಿಸಿದರು.

ಜ್ಞಾನದ ಬೆಳಕನ್ನು ಇಡೀ ಜಗತ್ತಿಗೆ ಪಸರಿಸುವ ಜವಾಬ್ದಾರಿ, ನಿರ್ವಹಣೆ ನಮ್ಮದು. ಇದರಿಂದಾಗಿ ಇಡೀ ದೇಶದ ಘನತೆ ಹೆಚ್ಚುತ್ತದೆ. ಇಂದು ಇಸ್ಕಾನ್ ಬಹಳ ಉತ್ತಮವಾದ ಕೆಲಸವನ್ನು ಮಾಡುತ್ತಿದೆ. ಮೊದಲ ಬಾರಿಗೆ ಬಿಸಿಯೂಟ ನೀಡುವ ಜವಬ್ದಾರಿಯನ್ನು ನಿರ್ವಹಿಸಿದ ಶ್ರೇಯಸ್ಸು ಇಸ್ಕಾನ್‌ಗೆ ಸಲ್ಲುತ್ತದೆ ಎಂದು ತಿಳಿಸಿದರು.

ಕಾನೂನು ಪದಕೋಶ ಮುದ್ರಣಕ್ಕೆ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರ ಮಾರ್ಗದರ್ಶನ ಹಾಗೂ ಪ್ರೇರಣೆಯಿಂದ ಕಾನೂನು ಪದಕೋಶ ಇಂದು ಬಿಡುಗಡೆ ಕಾಣುತ್ತಿದೆ. ಇದಕ್ಕೆ ಅವರು ಸಲ್ಲಿಸಿದ ಕೊಡುಗೆ ಅತ್ಯಮೂಲ್ಯವಾದದ್ದು ಎಂದು ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ತಿಳಿಸಿದರು.

ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನಾ ಇಲಾಖೆ ಮತ್ತು ಸಣ್ಣ ನೀರಾವರಿ ಇಲಾಖೆ ಸಚಿವರಾದ ಜೆ.ಸಿ. ಮಾಧುಸ್ವಾಮಿ ಅವರು ಮಾತನಾಡುತ್ತಾ, ಕಾನೂನು ಭಾಷೆ ಸಾಮಾನ್ಯ ಭಾಷೆಗಿಂತ ಭಿನ್ನ ಎಂಬುದು ಎಲ್ಲರಿಗೂ ತಿಳಿದ ವಿಷಯವಾಗಿದೆ. ಸರಳ ಕನ್ನಡ ಕಾನೂನು ಪದಗಳು ಆಯಾ ಕ್ಷೇತ್ರದಲ್ಲಿ ದೈನಂದಿನ ಬಳಕೆಯಲ್ಲಿ ಹೆಚ್ಚು ಹೆಚ್ಚು ಬಳಕೆ ಆಗಬೇಕು. ಆಗಮಾತ್ರ ಕಬ್ಬಿಣದ ಕಡಲೆ ಎನ್ನುವ ಕಾನೂನು ಭಾಷೆ ಸಾಮಾನ್ಯರಿಗೂ ತಲುಪಬಲ್ಲದು. ಈ ನಿಟ್ಟಿನಲ್ಲಿ ಈಗ ಹೊರತಂದಿರುವ ಕಾನೂನು ಪದಕೋಶ, ಪ್ರಮುಖವಾಗಿ ನ್ಯಾಯಾಂಗ ಕ್ಷೇತ್ರ ಹಾಗೂ ಇತರೆ ಸಾಮಾನ್ಯ ಆಡಳಿತ, ಖಾಸಗಿ ಕ್ಷೇತ್ರ, ವಿಜ್ಞಾನ ಕ್ಷೇತ್ರ ಮುಂತಾದ ವಲಯಗಳಲ್ಲಿ ತುಂಬಾ ಉಪಯುಕ್ತವಾಗಲಿದೆ ಎಂದು ತಿಳಿಸಿದರು.

ಆಚಾರ್ಯ ಭಕ್ತಿವೇದಾಂತ ಸ್ವಾಮಿ ಪ್ರಭುಪಾದರು ಧಾರ್ಮಿಕ ಕ್ಷೇತ್ರದಲ್ಲಿ ರಾಯಬಾರಿಯಾಗಿ ಕಾರ್ಯ ನಿರ್ವಹಿಸಿ ಶ್ರೀಕೃಷ್ಣನ ಹೆಸರನ್ನು ಇಡೀ ಜಗತ್ತಿಗೆ ತಲುಪಿಸಿದ ಮಹಾನ್ ವ್ಯಕ್ತಿ. ಅವರನ್ನು ಸ್ಮರಣೆ ಮಾಡಿ ಮಾನ್ಯ ಪ್ರಧಾನ ಮಂತ್ರಿಗಳು ಅವರ ನೆನಪಿಗಾಗಿ ಈ ನಾಣ್ಯವನ್ನು ಬಿಡುಗಡೆ ಮಾಡಿರುವುದು ತುಂಬಾ ಸಂತೋಷ ತಂದಿದೆ ಎಂದು ತಿಳಿಸಿದರು.

ಸಮಾರಂಭದಲ್ಲಿ ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಗೃಹಮಂತ್ರಿ ಅರಗ ಜ್ಞಾನೇಂದ್ರ, ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವರಾದ ಗೋವಿಂದ ಕಾರಜೋಳ, ರೇಷ್ಮೆ ಹಾಗೂ ಯುವ ಸಬಲೀಕರಣ ಸಚಿವ ಕೆ.ಸಿ. ನಾರಾಯಣಗೌಡ, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಕೆ.ಎಸ್. ಈಶ್ವರಪ್ಪ, ಮುಜರಾಯಿ, ಹಜ್ ಮತ್ತು ವಕ್ಫ್ ಸಚಿವೆ ಶ್ರೀಮತಿ ಶಶಿಕಲಾ ಜೊಲ್ಲೆ, ಜಪಾನ್ ದೇಶದಿಂದ ಆಗಮಿಸಿದ್ದ ಆಚಾರ್ಯ ಭಾನು ಮಹಾರಾಜ್, ಸಂಸದೀಯ ವ್ಯವಹಾರಗಳ ಹಾಗೂ ಶಾಸನ ರಚನಾ ಇಲಾಖೆಯ ಕಾರ್ಯದರ್ಶಿ ಬಿ. ಶ್ರೀಧರ್, ಭಾಷಾಂತರ ಇಲಾಖೆಯ ನಿರ್ದೇಶಕರಾದ ಎಂ. ವೆಂಕಟೇಶ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಶುದ್ಧೀಕರಣ ಘಟಕಗಳ ಸ್ಥಾಪನೆಗೆ ಹೆಚ್ಚಿನ ಆದ್ಯತೆ : ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ

ಬೆಂಗಳೂರು, ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ):

ಬೆಂಗಳೂರು ಬೃಹತ್ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಎಷ್ಟು ಪ್ರಮಾಣದಲ್ಲಿ ಒಳಚರಂಡಿ ನೀರು ಉತ್ಪತ್ತಿಯಾಗುತ್ತಿದೆಯೋ ಅಷ್ಟೇ ಪ್ರಮಾಣದಲ್ಲಿ ಹೆಚ್ಚಿನ ಸಾಮರ್ಥ್ಯವುಳ್ಳ ಶುದ್ಧೀಕರಣ ಘಟಕಗಳನ್ನು ಮುಂದಿನ ದಿನಗಳಲ್ಲಿ ಸ್ಥಾಪಿಸಲು ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ತಿಳಿಸಿದರು.

ಇಂದು ವಿಧಾನಸಭಾ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯರಾದ ಕೆ.ಜೆ. ಜಾರ್ಜ್ ಅವರ ಪ್ರಶ್ನೆಗೆ ಉತ್ತರ ನೀಡಿದ ಮುಖ್ಯಮಂತ್ರಿಗಳು, ಪಾಲಿಕೆ ವ್ಯಾಪ್ತಿಯಲ್ಲಿ 1,440 ಎಂ.ಎಲ್.ಡಿ ಒಳಚರಂಡಿ ನೀರು ಉತ್ಪತ್ತಿಯಾಗುತ್ತಿದೆ. ಪ್ರಸ್ತುತ 33 ಸಂಸ್ಕರಣ ಘಟಕಗಳಿದ್ದು, ವೃಷಭಾವತಿ ವ್ಯಾಲಿ ನಾಯಂಡಹಳ್ಳಿ, ಮಡಿವಾಳ, ಪುಟ್ಟೇನಹಳ್ಳಿ, ಕಗ್ಗದಾಸಪುರದಲ್ಲಿ ಒಟ್ಟು 166 ಎಂ.ಎಲ್.ಡಿ ಸಾಮರ್ಥ್ಯವುಳ್ಳ ಸಂಸ್ಕರಣ ಘಟಕಗಳ ಕಾಮಗಾರಿಯು ಪ್ರಗತಿಯಲ್ಲಿದ್ದು, ಅತಿ ಶೀಘ್ರದಲ್ಲಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಎಂದರು.

ಕಾವೇರಿ 5ನೇ ಹಂತದ ಯೋಜನೆಯಡಿಯಲ್ಲಿ ಸಿಪಿ–25, ಸಿಪಿ–26 ಮತ್ತು ಸಿಪಿ–27 ಪ್ಯಾಕೇಜುಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, 124 ಎಂ.ಎಲ್.ಡಿ ಸಾಮರ್ಥ್ಯವುಳ್ಳ ತ್ಯಾಜ್ಯ ನೀರು ಶುದ್ಧೀಕರಣ ಘಟಕಗಳನ್ನು ನಿರ್ಮಿಸಲಾಗುತ್ತಿದೆ ಎಂದು ಸದನಕ್ಕೆ ಮಾಹಿತಿ ನೀಡಿದರು.

## ರಸ್ತೆ ಅಭಿವೃದ್ಧಿಗೆ 6.26 ಕೋಟಿ ಮಂಜೂರು : ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ

ಬೆಂಗಳೂರು, ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ):

ಬೆಂಗಳೂರು ಬೃಹತ್ ನಗರ ಪಾಲಿಕೆಯ ವಾರ್ಡ್ ಸಂಖ್ಯೆ–191 ವ್ಯಾಪ್ತಿಗೆ ಒಳಪಡುವ ಕೂಡ್ಲು ಪ್ರದೇಶದ ಪ್ರಮುಖ ರಸ್ತೆಗಳ ಅಭಿವೃದ್ಧಿಗೆ 2 ಕೋಟಿ 26 ಲಕ್ಷ ಮಂಜೂರಾಗಿದ್ದು, 1 ಕೋಟಿ 26 ಲಕ್ಷ ವೆಚ್ಚದ ಕಾಮಗಾರಿ ಪ್ರಾರಂಭವಾಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ತಿಳಿಸಿದರು.

ಇಂದು ವಿಧಾನಸಭಾ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯರಾದ ಬಿ.ಶಿವಣ್ಣ ಅವರ ಪ್ರಶ್ನೆಗೆ ಉತ್ತರ ನೀಡಿದ ಮುಖ್ಯಮಂತ್ರಿಗಳು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯವರು 110 ಹಳ್ಳಿಗಳ ವ್ಯಾಪ್ತಿಯಲ್ಲಿ ಕುಡಿಯುವ ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಗುಂಡಿಗಳನ್ನು ಅಗೆದಿದ್ದು, ಇದರ ದುರಸ್ತಿ ಹಾಗೂ ಅಭಿವೃದ್ಧಿಗಾಗಿ 2 ಕೋಟಿ 90 ಲಕ್ಷ ಮಂಜೂರಾಗಿದೆ. ಬಾಕಿ ಇರುವ ಕಾಮಗಾರಿಗಳನ್ನು ಆದಷ್ಟು ಶೀಘ್ರದಲ್ಲಿ ಪೂರ್ಣಗೊಳಿಸಲಾಗುವುದು ಎಂದು ಸದನಕ್ಕೆ ಮಾಹಿತಿ ನೀಡಿದರು.

## ರಸ್ತೆ ಅಗಲೀಕರಣ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು : ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ

ಬೆಂಗಳೂರು, ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ):

ಬೆಂಗಳೂರು – ಬನ್ನೇರುಘಟ್ಟ ರಸ್ತೆ, ಬೇಗೂರು ರಸ್ತೆ ಮತ್ತು ಸರ್ಜಾಪುರ ರಸ್ತೆ ಅಗಲೀಕರಣ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ತಿಳಿಸಿದರು.

ಇಂದು ವಿಧಾನಸಭಾ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯರಾದ ಸತೀಶ್ ರೆಡ್ಡಿ ಅವರ ಪ್ರಶ್ನೆಗೆ ಉತ್ತರ ನೀಡಿದ ಮುಖ್ಯಮಂತ್ರಿಗಳು, ಖಾಸಗಿ ಭೂ ಮಾಲೀಕರು ಟಿ.ಡಿ.ಆರ್ ಯೋಜನೆಗೆ ಆಸಕ್ತಿಯನ್ನು ತೋರಿಸದ ಕಾರಣ ಹಾಗೂ ಕೆಲವೊಂದು ಮಾಲೀಕರು ನ್ಯಾಯಾಲಯದಲ್ಲಿ ದಾವೆ ಹೂಡಿರುವುದರಿಂದ ರಸ್ತೆ ಅಗಲೀಕರಣ ವಿಳಂಬವಾಗಿದೆ ಎಂದರು.

ಟಿ.ಡಿ.ಆರ್ ನಿಯಮಗಳನ್ನು ಸರಳೀಕರಣಗೊಳಿಸಿ, ಮತ್ತೊಮ್ಮೆ ಭೂಮಾಲೀಕರ ಮನವೊಲಿಸಿ ಟಿ.ಡಿ.ಆರ್. ಮೂಲಕ ಭೂಸ್ವಾಧೀನಕ್ಕೆ ಪ್ರಯತ್ನಿಸಿ ರಸ್ತೆಗಳ ಅಗಲೀಕರಣ ಕಾಮಗಾರಿಗಳನ್ನು ಅತಿ ಶೀಘ್ರದಲ್ಲಿ ಪೂರ್ಣಗೊಳಿಸಲಾಗುವುದು ಎಂದು ಸದನಕ್ಕೆ ಮಾಹಿತಿ ನೀಡಿದರು.

## ಜೂಜು ಮುಕ್ತ ರಾಜ್ಯವನ್ನಾಗಿಸಲು ಬದ್ಧತೆಯಿಂದ ಕೆಲಸ ನಿರ್ವಹಿಸಲಾಗುತ್ತಿದೆ : ಆರಗ ಜ್ಞಾನೇಂದ್ರ

ಬೆಂಗಳೂರು, ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ):

ಜೂಜು ಮುಕ್ತ ರಾಜ್ಯವನ್ನಾಗಿಸಲು ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಬದ್ಧತೆಯಿಂದ ಕೆಲಸ ನಿರ್ವಹಿಸುತ್ತಿದ್ದಾರೆ ಎಂದು ಗೃಹ ಸಚಿವ ಆರಗ ಜ್ಞಾನೇಂದ್ರ ತಿಳಿಸಿದರು.

ಇಂದು ವಿಧಾನಸಭಾ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯರಾದ ಡಾ: ಹೆಚ್.ಡಿ.ರಂಗನಾಥ್ ಅವರ ಪ್ರಶ್ನೆಗೆ ಉತ್ತರ ನೀಡಿದ ಗೃಹ ಸಚಿವರು, ಜೂಜಾಟ ಒಂದು ಸಾಮಾಜಿಕ ಖಾಯಿಲೆಯಾಗಿದ್ದು, ಜೂಜು ನಡೆಯುತ್ತಿರುವ ಮಾಹಿತಿ ದೊರೆತ ತಕ್ಷಣ ದಾಳಿ ನಡೆಸಿ ಕಾನೂನು ರೀತ್ಯ ಕ್ರಮ ಜರುಗಿಸಲಾಗುತ್ತಿದೆ. ಜೂಜಾಟದ ಪ್ರಕರಣಗಳಲ್ಲಿ ಬಾಗಿಯಾಗಿರುವ ಹಳೆ ಆರೋಪಿತರ ಮೇಲೆ ನಿರಂತರವಾಗಿ ನಿಗಾ ವಹಿಸಿ, ಜೂಜಾಟದಂತಹ ಚಟುವಟಿಕೆಗಳನ್ನು ತಡಯಲಾಗುತ್ತಿದೆ ಎಂದು ಸದನಕ್ಕೆ ಮಾಹಿತಿ ನೀಡಿದರು.

## ವಿಧಾನ ಸಭೆಯಲ್ಲಿ ವರದಿ ಮಂಡನೆ

ಬೆಂಗಳೂರು, ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ):

ಸರ್ಕಾರಿ ಭರವಸೆಗಳ ಸಮಿತಿ ಅಧ್ಯಕ್ಷ ಕೆ.ರಘುಪತಿ ಭಟ್ ಅವರು ಕರ್ನಾಟಕ ವಿಧಾನಸಭೆಯ ಸರ್ಕಾರಿ ಭರವಸೆಗಳ ಸಮಿತಿಯ 2020-21ನೇ ಸಾಲಿನ ಹತ್ತು ಮತ್ತು ಹನ್ನೊಂದನೇ ವರದಿಯನ್ನು ಹಾಗೂ ಅಧೀನ ಶಾಸನ ರಚನಾ ಸಮಿತಿಯ ಅಧ್ಯಕ್ಷರಾದ ಎಸ್. ಕುಮಾರ ಬಂಗಾರಪ್ಪ ಅವರು ಕರ್ನಾಟಕ ವಿಧಾನ ಮಂಡಲದ ಅಧೀನ ಶಾಸನ ರಚನಾ ಸಮಿತಿಯ 2020-21ನೇ ಸಾಲಿನ ಐವತ್ತೊಂದನೇ ವರದಿಯನ್ನು ಸಮಿತಿಯ ಪರವಾಗಿ ವಿಧಾನಸಭೆಯಲ್ಲಿ ಇಂದು ಮಂಡಿಸಿದರು.

## ನೂತನ ಕಟ್ಟಡ ಮಾಪನಸೌಧ ಉದ್ಘಾಟನಾ ಕಾರ್ಯಕ್ರಮ

ಬೆಂಗಳೂರು, ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ):

ಕಾನೂನು ಮಾಪನಶಾಸ್ತ್ರ ಇಲಾಖೆಯ ಬೆಂಗಳೂರು ಮಹಾನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಕಛೇರಿಗಳನ್ನು ಕಾನೂನು ಮಾಪನಶಾಸ್ತ್ರ ನಿಯಂತ್ರಕರ ಕಛೇರಿ ನಂ. 1 ಆಲಿ ಆಸ್ಕರ್ ರಸ್ತೆ (ಪೊಲೀಸ್ ಆಯುಕ್ತರ ಕಛೇರಿ ಹಿಂಭಾಗ) ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಮಾಪನಸೌಧ ಕಟ್ಟಡದ ಉದ್ಘಾಟನಾ ಕಾರ್ಯಕ್ರಮವನ್ನು ಸೆಪ್ಟೆಂಬರ್ 22, 2021ರ ಬುಧವಾರ ಬೆಳಿಗ್ಗೆ 9.30 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ನೂತನ ಕಟ್ಟಡದ ಉದ್ಘಾಟನೆಯನ್ನು ರಾಜ್ಯದ ಸನ್ಮಾನ್ಯ ಮುಖ್ಯಮಂತ್ರಿಗಳಾದ ಬಸವರಾಜ ಎಸ್ ಬೊಮ್ಮಾಯಿ ಅವರು ಹಾಗೂ ಅರಣ್ಯ, ಆಹಾರ ನಾಗರಿಕ ಸರಬರಾಜು ಇಲಾಖೆಯ ಸಚಿವರಾದ ಉಮೇಶ್ ವಿಶ್ವನಾಥ ಕತ್ತಿ ಅವರು ನೆರವೇರಿಸಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ 55ನೇ ಘಟಿಕೋತ್ಸವದಲ್ಲಿ ರಾಜ್ಯಪಾಲರು ವಿದ್ಯಾರ್ಥಿಗಳಿಗೆ ಪದಕ ಪ್ರದಾನ

ಬೆಂಗಳೂರು, ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ):

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ 55ನೇ ಘಟಿಕೋತ್ಸವ ಸಮಾರಂಭವು ಇಂದು ಗಾಂಧಿ ಕೃಷಿ ವಿಜ್ಞಾನ ಕೇಂದ್ರ (ಜಿಕೆವಿಕೆ) ಆವರಣದಲ್ಲಿರುವ ಡಾ॥ ಬಾಬು ರಾಜೇಂದ್ರ ಪ್ರಸಾದ್ ಅಂತರರಾಷ್ಟ್ರೀಯ ಸಭಾಂಗಣದಲ್ಲಿ **ಶ್ರೀ. ಥಾವರ್ ಚಂದ್ ಗೆಹ್ಲೋಟ್,** ಕರ್ನಾಟಕ ರಾಜ್ಯದ ಸನ್ಮಾನ್ಯ ರಾಜ್ಯಪಾಲರು ಹಾಗೂ ಕೃಷಿ ವಿಶ್ವವಿದ್ಯಾನಿಲಯದ ಕುಲಾಧಿಪತಿಗಳು ರವರು ಅಧ್ಯಕ್ಷತೆಯನ್ನು ವಹಿಸಿ ವಿದ್ಯಾರ್ಥಿಗಳಿಗೆ ಪದವಿ ಪ್ರಧಾನ ಮಾಡಿದರು.

**ಡಾ॥ ತ್ರಿಲೋಚನ ಮೋಹಪಾತ್ರ,** ಕಾರ್ಯದರ್ಶಿಗಳು (ಡೇರ್) ಮತ್ತು ಮಹಾ ನಿರ್ದೇಶಕರು, ಭಾರತೀಯ ಕೃಷಿ ಅನುಸಂಧಾನ ಪರಿಷತ್, ನವದೆಹಲಿ ಇವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಘಟಿಕೋತ್ಸವ ಭಾಷಣ ಮಾಡಿದರು (ವರ್ಚುಯಲ್). **ಬಿ.ಸಿ. ಪಾಟೀಲ್,** ಕರ್ನಾಟಕ ಸರ್ಕಾರದ ಸನ್ಮಾನ್ಯ ಕೃಷಿ ಸಚಿವರು ಹಾಗೂ ಕೃಷಿ ವಿಶ್ವವಿದ್ಯಾನಿಲಯದ ಸಹಕುಲಾಧಿಪತಿಗಳು ಘಟಿಕೋತ್ಸವ ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಶೈಕ್ಷಣಿಕ ವರ್ಷ–2019–20ರಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ 55ನೇ ಘಟಿಕೋತ್ಸವದಲ್ಲಿ ಒಟ್ಟಾರೆ 1012 ವಿದ್ಯಾರ್ಥಿಗಳಿಗೆ ವಿವಿಧ ಸ್ನಾತಕ ಹಾಗೂ ಸ್ನಾತಕೋತ್ತರ ವಿಷಯಗಳಲ್ಲಿ ಪದವಿ ಪ್ರಧಾನ ಮಾಡಲಾಗುತ್ತಿದೆ. ಅದರಲ್ಲಿ 659 ವಿದ್ಯಾರ್ಥಿಗಳು ವಿವಿಧ ಸ್ನಾತಕ ಪದವಿಗಳನ್ನು, 279 ವಿದ್ಯಾರ್ಥಿಗಳು ವಿವಿಧ ವಿಷಯಗಳಲ್ಲಿ ಸ್ನಾತಕೋತ್ತರ ಪದವಿಗಳನ್ನು ಹಾಗೂ 74 ವಿದ್ಯಾರ್ಥಿಗಳು ಡಾಕ್ಟೊರಲ್ ಪದವಿಗಳನ್ನು ಪಡೆದಿದ್ದಾರೆ.

ಇದೇ ಸಮಾರಂಭದಲ್ಲಿ ಡಾಕ್ಟರ್ ಆಫ್ ಫಿಲಾಸೊಫಿ ಪದವಿಯಲ್ಲಿ ಒಟ್ಟು 21 ಚಿನ್ನದ ಪದಕಗಳನ್ನು ಪ್ರಧಾನ ಮಾಡಲಾಗಿದ್ದು, ಅದರಲ್ಲಿ 05 ವಿದ್ಯಾರ್ಥಿನಿಯರು ಹಾಗೂ 07 ವಿದ್ಯಾರ್ಥಿಗಳು ಕೃಷಿ ವಿಶ್ವವಿದ್ಯಾನಿಲಯದ 12 ಚಿನ್ನದ ಪದಕಗಳನ್ನು, 08 ದಾನಿಗಳ ಚಿನ್ನದ ಪದಕಗಳು ಹಾಗೂ 01 ದಾನಿಗಳ ಚಿನ್ನದ ಪದಕ ಪ್ರಶಸ್ತಿ ಪ್ರಮಾಣ ಪತ್ರಗಳನ್ನು ಹಂಚಿಕೊಂಡಿರುತ್ತಾರೆ.

ಮಾಸ್ಟರ್ ಪದವಿಯಲ್ಲಿ ಒಟ್ಟು 74 ಚಿನ್ನದ ಪದಕಗಳನ್ನು ಪ್ರಧಾನ ಮಾಡಲಾಗಿದ್ದು, ಅದರಲ್ಲಿ 17 ವಿದ್ಯಾರ್ಥಿನಿಯರು ಹಾಗೂ 16 ವಿದ್ಯಾರ್ಥಿಗಳು ಕೃಷಿ ವಿಶ್ವವಿದ್ಯಾನಿಲಯ ನೀಡುವ 22 ಚಿನ್ನದ ಪದಕಗಳು ಹಾಗೂ 05 ಆವರಣದ ಚಿನ್ನದ ಪದಕಗಳನ್ನು, 37 ದಾನಿಗಳ ಚಿನ್ನದ ಪದಕಗಳು ಹಾಗೂ 10 ದಾನಿಗಳ ಚಿನ್ನದ ಪದಕ ಪ್ರಶಸ್ತಿ ಪ್ರಮಾಣ ಪತ್ರಗಳನ್ನು ಹಂಚಿಕೊಂಡಿರುತ್ತಾರೆ.

ಇದಲ್ಲದೆ, ಸ್ನಾತಕ ಪದವಿಯಲ್ಲಿ ಒಟ್ಟು 55 ಚಿನ್ನದ ಪದಕಗಳನ್ನು ಪ್ರಧಾನ ಮಾಡಲಾಗಿದ್ದು, ಅದರಲ್ಲಿ 11 ವಿದ್ಯಾರ್ಥಿನಿಯರು ಹಾಗೂ 05 ವಿದ್ಯಾರ್ಥಿಗಳು ಕೃಷಿ ವಿಶ್ವವಿದ್ಯಾನಿಲಯ ನೀಡುವ 06 ಕೃಷಿ ವಿಶ್ವವಿದ್ಯಾನಿಲಯ ನೀಡುವ ಚಿನ್ನದ ಪದಕಗಳು, 03 ಆವರಣದ ಚಿನ್ನದ ಪದಕಗಳು, 01 ಕೃವಿವಿಯ ಕ್ರೀಡಾ ಚಿನ್ನದ ಪದಕ, 37 ದಾನಿಗಳ ಚಿನ್ನದ ಪದಕಗಳು ಹಾಗೂ 08 ದಾನಿಗಳ ಚಿನ್ನದ ಪದಕ ಪ್ರಶಸ್ತಿ ಪ್ರಮಾಣ ಪತ್ರಗಳನ್ನು ಹಂಚಿಕೊಂಡಿರುತ್ತಾರೆ.

55ನೇ ಘಟಿಕೋತ್ಸವ ಸಮಾರಂಭದಲ್ಲಿ ಒಟ್ಟಾರೆ 150 ಚಿನ್ನದ ಪದಕಗಳನ್ನು ಪಡೆದಿದ್ದು ಅದರಲ್ಲಿ 28 ಬಾಲಕರಿಗೆ 23 ವಿಶ್ವವಿದ್ಯಾನಿಲಯದ ಚಿನ್ನದ ಪದಕ, 27 ದಾನಿಗಳ ಚಿನ್ನದ ಪದಕ ಹಾಗೂ 07 ದಾನಿಗಳ ಚಿನ್ನದ ಪದಕ ಪ್ರಶಸ್ತಿ ಪ್ರಮಾಣ ಪತ್ರಗಳನ್ನು ವಿತರಿಸಲಾಗಿದೆ. ಅದರಂತೆ 33 ವಿಧ್ಯಾರ್ಥಿನಿಯರಿಗೆ 26 ವಿಶ್ವವಿದ್ಯಾನಿಲಯದ ಚಿನ್ನದ ಪದಕ, 55 ದಾನಿಗಳ ಚಿನ್ನದ ಪದಕ ಹಾಗೂ 12 ದಾನಿಗಳ ಚಿನ್ನದ ಪದಕ ಪ್ರಶಸ್ತಿ ಪ್ರಮಾಣ ಪತ್ರಗಳನ್ನು ವಿತರಿಸಲಾಗಿದೆ. ಒಟ್ಟು 61 ವಿದ್ಯಾರ್ಥಿಗಳಿಗೆ 49 ವಿಶ್ವವಿದ್ಯಾನಿಲಯದ ಚಿನ್ನದ ಪದಕಗಳನ್ನು, 82 ದಾನಿಗಳ ಚಿನ್ನದ ಪದಕಗಳನ್ನು ಹಾಗೂ 19 ದಾನಿಗಳ ಚಿನ್ನದ ಪದಕ ಪ್ರಶಸ್ತಿ ಪ್ರಮಾಣ ಪತ್ರಗಳನ್ನು ವಿತರಿಸಲಾಗಿದೆ.

55ನೇ ಘಟಿಕೋತ್ಸವದಲ್ಲಿ ಚಿನ್ನದ ಪದಕ ವಿಜೇತರು, ಪದವಿ ಪ್ರಧಾನ ಒಟ್ಟಾರೆ ವಿದ್ಯಾರ್ಥಿಗಳು : 1012, ಸ್ನಾತಕ ಪದವಿ : 659 ವಿದ್ಯಾರ್ಥಿಗಳು, ಸ್ನಾತಕೋತ್ತರ : 279 ವಿದ್ಯಾರ್ಥಿಗಳು, ಡಾಕ್ಟೊರಲ್ : 74 ವಿದ್ಯಾರ್ಥಿಗಳು, ಡಾಕ್ಟರ್ ಆಫ್ ಫಿಲಾಸೊಫಿ – 21, (ಕೃಷಿ ವಿಶ್ವವಿದ್ಯಾನಿಲಯ ನೀಡುವ 12 ಚಿನ್ನದ ಪದಕಗಳು, 08 ದಾನಿಗಳ ಚಿನ್ನದ ಪದಕಗಳು ಹಾಗೂ 01 ದಾನಿಗಳ ಚಿನ್ನದ ಪದಕ ಪ್ರಶಸ್ತಿ ಪ್ರಮಾಣ ಪತ್ರಗಳು) ವಿದ್ಯಾರ್ಥಿನಿಯರು – 5, ವಿದ್ಯಾರ್ಥಿಗಳು – 7, ಮಾಸ್ಟರ್ ಪದವಿ– 74, (ಕೃಷಿ ವಿಶ್ವವಿದ್ಯಾನಿಲಯ ನೀಡುವ 22 ಚಿನ್ನದ ಪದಕಗಳು ಹಾಗೂ 05 ಆವರಣದ ಚಿನ್ನದ ಪದಕಗಳು, 37 ದಾನಿಗಳ ಚಿನ್ನದ

ಪದಕಗಳು ಹಾಗೂ 10 ದಾನಿಗಳ ಚಿನ್ನದ ಪದಕ ಪ್ರಶಸ್ತಿ ಪ್ರಮಾಣ ಪತ್ರಗಳು) ವಿದ್ಯಾರ್ಥಿನಿಯರು – 17, ವಿದ್ಯಾರ್ಥಿಗಳು – 16, ಸ್ನಾತಕ ಪದವಿ – 55, (ಕೃಷಿ ವಿಶ್ವವಿದ್ಯಾನಿಲಯ ನೀಡುವ 06 ಚಿನ್ನದ ಪದಕಗಳು, 03 ಆವರಣದ ಚಿನ್ನದ ಪದಕಗಳು, 37 ದಾನಿಗಳ ಚಿನ್ನದ ಪದಕಗಳು, 01 ಕೃವಿವಿಯ ಕ್ರೀಡಾ ಚಿನ್ನದ ಪದಕ ಹಾಗೂ 08 ದಾನಿಗಳ ಚಿನ್ನದ ಪದಕ ಪ್ರಶಸ್ತಿ ಪ್ರಮಾಣ ಪತ್ರಗಳು) ವಿದ್ಯಾರ್ಥಿನಿಯರು – 11, ವಿದ್ಯಾರ್ಥಿಗಳು – 5, ಒಟ್ಟು (131+19=150), ಚಿನ್ನದ ಪದಕಗಳು – 131, ದಾನಿಗಳ ಚಿನ್ನದ ಪದಕ ಪ್ರಮಾಣಪತ್ರ – 19, ವಿಧ್ಯಾರ್ಥಿನಿಯರು – 33, ಚಿನ್ನದ ಪದಕ – 81, ದಾನಿಗಳ ಚಿನ್ನದ ಪ್ರಮಾಣ ಪತ್ರ – 12, ವಿಧ್ಯಾರ್ಥಿಗಳು – 28, ಚಿನ್ನದ ಪದಕ – 50, ದಾನಿಗಳ ಚಿನ್ನದ ಪ್ರಮಾಣ ಪತ್ರ – 07, (ಅತಿ ಹೆಚ್ಚು – ಸರಾಸರಿ ಅಂಕ), ವಿದ್ಯಾರ್ಥಿನಿಯರು – ಶೇ.58.70, ವಿದ್ಯಾರ್ಥಿಗಳು – ಶೇ.41.30 ಪದಕಗಳನ್ನು ಪಡೆದಿರುತ್ತಾರೆ.

## 55th Convocation-2021, University of Agricultural Sciences, Bangalore

Bengaluru, September 21 (Karnataka Information):

The **55th Convocation-2020** of the University of Agricultural Sciences, Bangalore is held on **21st September 2021** at **Dr. Babu Rajendra Prasad International Convention Centre, GKVK Campus, Bangalore.**

During this **55th C**onvocation-2021 (**Academic year 2019-20) a total of 1012** students are being conferred with various degrees, of which **659** students receive Bachelor's Degrees, **279** students with Master's Degrees and 74 students receive Doctoral Degrees.

In **Doctoral** degree programmes: **07** boys and **05** girls have been awarded **12** University Gold Medals, **08** Donor's Gold Medals and **01** Donor's Gold Medals Certificates. Total **21** Gold Medals.

In **Master's** degree programmes: **16** boys and **17** girls are receiving **22** University Merit Gold Medals, **05** Campus Gold medals, **37** Donor's Gold Medals and **10** Donors Gold Medal Certificates. Total **74** Gold Medals.

In **Undergraduate** degree programmes: **05** boys and **11** girls are receiving **06** University Merit Gold Medals, **03** Campus Gold medals, **01** UAS Sports Gold Medal, **37** Donor's Gold Medals and 08 Donors Gold Medal Certificates. Total **55** Gold Medals.

During 55th Convocation, total number of **150** Gold Medals and certificates is awarding for **28** Boys awarded with **23** UAS Gold Medals and **27** Donors Gold Medal and **07** Donors Gold Medal Certificates. **33** Girls are awarded with **26** UAS Gold Medals and **55** Donors Gold Medal and **12** Donors Gold Medal Certificates. **Total 61 students are awarded with 49 UAS Gold Medals and 82 Donors Gold Medal and 19 Donors Gold Medal Certificates.**

## ಗುಣಮಟ್ಟವಲ್ಲದ ಔಷಧಿ / ಕಾಂತಿವರ್ಧಕಗಳ ಬಳಕೆ ನಿಷೇಧ

ಬೆಂಗಳೂರು, ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ):

ಕರ್ನಾಟಕ ಔಷಧ ಪ್ರಯೋಗಾಲಯದ ಸರ್ಕಾರಿ ವಿಶ್ಲೇಷಕರು, ಒರೋಮೆಫ್ ಟ್ಯಾಬ್ಲೆಟ್ಸ್ (ಡೈಕ್ಲೋಮೆನ್ ಹೆಚ್‌ಸಿಎಲ್ & ಮೆಫಿನಾಮಿಕ್ ಆಸಿಡ್), ಪೋಮೆಟ್ (ಪ್ಯಾಂಟೋಫ್ರಜೋಲ್ ಟ್ಯಾಬ್ಲೆಟ್ಸ್ ಐ.ಪಿ 40ಎಂಜಿ), ಮ್ಯಾಕ್ಸ್‌ಲೋನ್ 8 ಟ್ಯಾಬ್ಲೆಟ್ಸ್ (ಮಿಥೈಲ್ ಫ್ರಡ್ನಿಸೋಲೋನ್ ಟ್ಯಾಬ್ಲೆಟ್ಸ್ ಐ.ಪಿ), ಕ್ಯಾಲ್ಸಿಡ್ (ಕ್ಯಾಲ್ಸಿಯಂ ಕಾರ್ಬೋನೇಟ್ & ವಿಟಮಿನ್ ಡಿ3 ಟ್ಯಾಬ್ಲೆಟ್ಸ್ ಐಪಿ) ಗ್ಲುಸಿಮ್ – ಎಂ1 (ಗ್ಲಿಮಿಫಿರೈಡ್ ಅಂಡ್ ಮೆಟಪಾರ್‌ಮಿನ್ ಹೈಡ್ರೋಕ್ಲೋರೈಡ್ ಟ್ಯಾಬ್ಲೆಟ್ಸ್ ಐಪಿ), ಸೆಫಾಡಾಕ್ಸಿಮ್ ಪ್ರೇಕ್ಸಿಟಿಲ್ ಟ್ಯಾಬ್ಲೆಟ್ಸ್ ಐ.ಪಿ (ಪ್ರೋಕ್ಸೆಲ್–200 ಟ್ಯಾಬ್ಲೆಟ್ಸ್), ಪ್ಯಾರಸೆಟಮೋಲ್ ಟ್ಯಾಬ್ಲೆಟ್ಸ್ ಐ.ಪಿ 500 ಎಂಜಿ, ಯೆಟೊಸೀ (ಆಸ್ಕೋರ್ಬಿಕ್ ಆಸಿಡ್ (ವಿಟಮಿನ್ ಸಿ), ಸೋಡಿಯಂ ಆಸ್ಕೋರ್ಬೇಟ್ & ಜಿಂಕ್ ಚೆವಾಬಲ್ ಟ್ಯಾಬ್ಲೆಟ್ಸ್), ಗ್ಲಿಮಿಜ್–ಎಂಎಫ್ 0.5 ಎಸ್‌ಆರ್ ಟ್ಯಾಬ್ಲೆಟ್ಸ್ (ಗ್ಲಿಮಿಫಿರೈಡ್ ವಿಥ್ ಮೆಟಪಾರ್‌ಮಿನ್ ಹೈಡ್ರೋಕ್ಲೋರೈಡ್ (ಎಸ್‌ಆರ್) ಟ್ಯಾಬ್ಲೆಟ್ಸ್), ಗ್ಲಿಂಟ್ ಹ್ಯಾಂಡ್ ಕ್ಲೆನ್ಸರ್, ರೋಲರ್ ಬ್ಯಾಂಡೇಜ್ (ಶಿಡ್ಯೂಲ್ ಎಫ್ (II)) ಈ ಔಷಧಿಗಳನ್ನು / ಕಾಂತಿವರ್ಧಕ ಔಷಧ ವ್ಯಾಪಾರಿಗಳು, ಸಗಟು ಔಷಧ ಮಾರಾಟಗಾರರು, ವೈದ್ಯರು, ಆಸ್ಪತ್ರೆ, ಮತ್ತು ನರ್ಸಿಂಗ್ ಹೋಂನವರು ದಾಸ್ತಾನು ಮಾಡುವುದಾಗಲೀ, ಮಾರಾಟ ಮಾಡುವುದಾಗಲೀ, ಅಥವಾ ಉಪಯೋಗಿಸುವುದಾಗಲೀ ಮಾಡಬಾರದು ಹಾಗೂ ಯಾರಾದರೂ ಔಷಧಿಗಳ ದಾಸ್ತಾನನ್ನು ಹೊಂದಿದ್ದಲ್ಲಿ ಕೂಡಲೇ ಸಂಬಂಧಪಟ್ಟ ಕ್ಷೇತ್ರದ ಔಷಧ ಪರಿವೀಕ್ಷಕರು ಅಥವಾ ಸಹಾಯಕ ಔಷಧ ನಿಯಂತ್ರಕರ ಗಮನಕ್ಕೆ ತರಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಪದವಿ ವಿದ್ಯಾರ್ಥಿಗಳ ಸ್ಕಾಲರ್‌ಶಿಪ್‌ಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ):

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (M.H.R.D), ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರ ವತಿಯಿಂದ 2021ರಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಂಯೋಜನೆವಾರು Top 20th Percentile or 80th Percentile ಗಿಂತ ಹೆಚ್ಚು ಅಂಕಗಳಿಸಿದ ಹಾಗೂ ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ (ಕನಿಷ್ಠ 03 ವರ್ಷದ ಪದವಿ ತರಗತಿಗೆ ದಾಖಲಾಗಿರುವ) ವಿದ್ಯಾರ್ಥಿಗಳಿಂದ Central Sector Scheme of Scholarship for College and University Students ಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಕೇಂದ್ರ ಸರ್ಕಾರದ ವತಿಯಿಂದ ವೆಬ್‌ಸೈಟ್ ವಿಳಾಸ: www.scholarships.gov.in ನ National e-Scholarship Portal ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದ ಕಾರಣ, ಪೋರ್ಟಲ್‌ನಲ್ಲಿಯೇ 2021 ರ ಹೊಸ ಬ್ಯಾಚ್‌ನ ವಿದ್ಯಾರ್ಥಿಗಳು ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ವೆಬ್‌ಸೈಟ್ ವಿಳಾಸ: (Link for submission of application website:www.scholarship.gov.in =» New User(Register). ಪ್ರಸ್ತುತ ಪೋರ್ಟಲ್‌ನಲ್ಲಿ ಹೊಸ ಬ್ಯಾಚ್‌ನ ಕಾರ್ಯ ಜಾರಿಯಲ್ಲಿದ್ದು, ಶೀಘ್ರದಲ್ಲಿಯೇ ಪೂರ್ಣಗೊಳ್ಳಲಿದೆ.

ಆಸಕ್ತ ವಿದ್ಯಾರ್ಥಿಗಳು ಆಗಾಗ ಈ ವೆಬ್‌ಸೈಟನ್ನು ಗಮನಿಸುತ್ತಿದ್ದು, ಪ್ರಕ್ರಿಯೆ ಆರಂಭಗೊಂಡ ಕೂಡಲೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿಪಡಿಸುವ ದಿನಾಂಕದೊಳಗಾಗಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

2021ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ (ಹೊಸ ಹಾಗೂ ನವೀಕರಣಗಳಿಗೆ) ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ನೋಂದಣಿ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಬೇಕಿರುತ್ತದೆ. ಆದಕಾರಣ, ಆಸಕ್ತ ವಿದ್ಯಾರ್ಥಿಗಳು ಆಧಾರ್ ನೋಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಹೊಂದಿರಬೇಕು.

ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ ದಾಖಲೆಗಳ ಜೊತೆಯಲ್ಲಿ) ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಕೇಂದ್ರ ಸರ್ಕಾರದಿಂದ ನಿಗದಿಪಡಿಸಿರುವ ದಿನಾಂಕದೊಳಗಾಗಿ ಸಲ್ಲಿಸುವುದು.

ಪ್ರಾಚಾರ್ಯರುಗಳು, ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಹಾಗೂ ವಿದ್ಯಾರ್ಥಿಯು ಈ ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಮಾಹಿತಿಯನ್ನು ಆನ್‌ಲೈನ್ ಮೂಲಕವೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿಪಡಿಸಿರುವ ದಿನಾಂಕ: 30/11/2021 ರೊಳಗೆ ಇಲಾಖೆಗೆ ಸಲ್ಲಿಸಬೇಕು.

ಯಾವುದೇ ಕಾರಣಕ್ಕೂ ನೈಜ ವಿದ್ಯಾರ್ಥಿಯ ಹೊರತು ಆಯ್ಕೆಯಾಗದ ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನ ಜಮೆಯಾಗದಂತೆ ನೋಡಿಕೊಳ್ಳುವುದು ಪ್ರಾಚಾರ್ಯರ ಜವಾಬ್ದಾರಿಯಾಗಿರುತ್ತದೆ.

ಹೆಚ್ಚಿನ ಮಾಹಿತಿಗೆ ಕೇಂದ್ರ ಕಛೇರಿಯ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನದ ಶಾಖೆಯನ್ನು ಸಂಪರ್ಕಿಸಬಹುದು. ಪ್ರಸ್ತುತ National e-Scholarship Portal ನಲ್ಲಿ ವಿದ್ಯಾರ್ಥಿ ವೇತನದ ನಿಮಿತ್ತ ಕಾರ್ಯ ನಡೆಯುತ್ತಿರುವ ಕಾರಣ ಹೆಚ್ಚಿನ ಮಾಹಿತಿಯು ಲಭ್ಯವಿರುವುದಿಲ್ಲ. ಪ್ರಕ್ರಿಯೆ ಚಾಲನೆಗೊಂಡ ಕೂಡಲೇ ವಿದ್ಯಾರ್ಥಿ ವೇತನದ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾದಲ್ಲಿ ಇಲಾಖಾ ಅಂತರ್ಜಾಲದಲ್ಲಿ ಅಳವಡಿಸಲಾಗುವುದು.

ಪದವಿ ಪೂರ್ವ ಶಿಕ್ಷಣ ಇಲಾಖೆಯ **ವೆಬ್‌ಸೈಟ್ ವಿಳಾಸ**: http://pue.kar.nic.in =» Scholarship =» MHRD Scholarship =» MHRD Scholarship 2021–Fresh batchನಿಂದ ಮಾಹಿತಿಯನ್ನು ಪಡೆದುಕೊಳ್ಳಬಹುದು.

**2020**ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ **"Direct Benefit Transfer (DBT) Programme"**ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ **ಪ್ರಥಮ ನವೀಕರಣಕ್ಕೆ** ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬೇಕು.

ಕೇಂದ್ರ ಸರ್ಕಾರದ ವತಿಯಿಂದ **ವೆಬ್‌ಸೈಟ್ ವಿಳಾಸ: www.scholarships.gov**. ನ **National e-Scholarship Portal** ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, **2020**ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು **ಪ್ರಥಮ ನವೀಕರಣದ** ನಿಮಿತ್ತ ಈ **ಪೋರ್ಟಲ್**ನಲ್ಲಿಯೇ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕು.

ವಿದ್ಯಾರ್ಥಿಗಳು ವೆಬ್‌ಸೈಟನ್ನು ಕೂಡಲೇ ಸಂಪರ್ಕಿಸಿ ಆನ್‌ಲೈನ್ ಮೂಲಕ ದಿನಾಂಕ: **30–11–2021ರೊಳಗೆ** ಅರ್ಜಿಯನ್ನು ಸಲ್ಲಿಸುವುದು.

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ **2020**ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ **ಪ್ರಥಮ ನವೀಕರಣಕ್ಕೆ** ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ: **http://pue.kar.nic.in** =>**Scholarship=>MHRD Scholarship=> MHRD Scholarship 2020- I RENEWAL**. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: **30–11–2021 ರೊಳಗೆ** ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬೇಕು.

**ಪ್ರಥಮ ನವೀಕರಣ** ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ

ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದೆ.

## 2019ನೇ ಸಾಲಿನ ಪದವಿ ವಿದ್ಯಾರ್ಥಿಗಳ ಸ್ಕಾಲರ್‌ಶಿಪ್‌ನ ನವೀಕರಣಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ):

**2019**ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ **"Direct Benefit Transfer (DBT) Programme"** ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ **ದ್ವಿತೀಯ** ನವೀಕರಣಕ್ಕೆ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿದೆ.

ಕೇಂದ್ರ ಸರ್ಕಾರದ ವತಿಯಿಂದ **ವೆಬ್‌ಸೈಟ್ ವಿಳಾಸ : www.scholarships.gov** ನ **National e-Scholarship Portal** ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, **2019**ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು **ದ್ವಿತೀಯ ನವೀಕರಣದ** ನಿಮಿತ್ತ ಈ **ಪೋರ್ಟಲ್**ನಲ್ಲಿಯೇ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ವೆಬ್‌ಸೈಟನ್ನು ಸಂಪರ್ಕಿಸಿ ಆನ್‌ಲೈನ್ ಮೂಲಕ ದಿನಾಂಕ: **30–11–2021ರೊಳಗೆ** ಅರ್ಜಿಯನ್ನು ಸಲ್ಲಿಸುವುದು.

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ **2019**ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ **ದ್ವಿತೀಯ ನವೀಕರಣಕ್ಕೆ** ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ: **http://pue.kar.nic.in** =>**Scholarship=>MHRD Scholarship=> MHRD Scholarship 2019 - II RENEWAL**. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: **30–11–2021ರೊಳಗಾಗಿ** ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವುದು. **ದ್ವಿತೀಯ ನವೀಕರಣ** ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## 2018ನೇ ಸಾಲಿನ ಪದವಿ ವಿದ್ಯಾರ್ಥಿಗಳ ಸ್ಕಾಲರ್‌ಶಿಪ್‌ನ ನವೀಕರಣಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ):

**2018**ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ **"Direct Benefit Transfer (DBT) Programme"** ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ **ತೃತೀಯ** ನವೀಕರಣಕ್ಕೆ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಕೇಂದ್ರ ಸರ್ಕಾರದ ವತಿಯಿಂದ **ವೆಬ್‌ಸೈಟ್ ವಿಳಾಸ : www.scholarships.gov**.ನ **National e-Scholarship Portal** ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, **2018**ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು **ತೃತೀಯ ನವೀಕರಣದ** ನಿಮಿತ್ತ ಈ **ಪೋರ್ಟಲ್**ನಲ್ಲಿಯೇ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ವೆಬ್‌ಸೈಟನ್ನು ಸಂಪರ್ಕಿಸಿ ಆನ್‌ಲೈನ್ ಮೂಲಕ ದಿನಾಂಕ: **30–11–2021ರೊಳಗೆ** ಅರ್ಜಿಯನ್ನು ಸಲ್ಲಿಸುವುದು.

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ **2018**ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ **ತೃತೀಯ** ನವೀಕರಣಕ್ಕೆ ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ: **http://pue.kar.nic.in**

=>**Scholarship=>MHRD Scholarship=> MHRD Scholarship 2018 - III RENEWAL**. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: **30–11–2021ರೊಳಗೆ** ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವುದು. **ತೃತೀಯ ನವೀಕರಣ** ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## 2017ನೇ ಸಾಲಿನ ಪದವಿ ವಿದ್ಯಾರ್ಥಿಗಳ ಸ್ಕಾಲರ್‌ಶಿಪ್‌ನ ನವೀಕರಣಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ):

**2017**ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ **"Direct Benefit Transfer (DBT) Programme"** ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ **ನಾಲ್ಕನೇಯ ನವೀಕರಣಕ್ಕೆ** ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಕೇಂದ್ರ ಸರ್ಕಾರದ ವತಿಯಿಂದ **ವೆಬ್‌ಸೈಟ್ ವಿಳಾಸ: www.scholarships.gov.ನ National e-Scholarship Portal** ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, **2017**ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು **ನಾಲ್ಕನೇಯ ನವೀಕರಣದ** ನಿಮಿತ್ತ ಈ **ಪೋರ್ಟಲ್**ನಲ್ಲಿಯೇ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ವೆಬ್‌ಸೈಟನ್ನು ಸಂಪರ್ಕಿಸಿ ಆನ್‌ಲೈನ್ ಮೂಲಕ ದಿನಾಂಕ: **30–11–2021ರೊಳಗೆ** ಅರ್ಜಿಯನ್ನು ಸಲ್ಲಿಸುವುದು.

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ **2017**ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ **ನಾಲ್ಕನೇಯ ನವೀಕರಣಕ್ಕೆ** ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ: **http://pue.kar.nic.in** =>**Scholarship=>MHRD Scholarship=> MHRD Scholarship 2017 - IV RENEWAL**. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: **30–11–2021ರೊಳಗೆ** ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸುವುದು. **ನಾಲ್ಕನೇಯ ನವೀಕರಣ** ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

ಬೆಂಗಳೂರು, ಸೆಪ್ಟೆಂಬರ್ 21 (ಕರ್ನಾಟಕ ವಾರ್ತೆ):

**ದಿನಾಂಕ: 21.9.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 70 | ತೃಪ್ತಿಕರ | $PM_{10}$ |

| | | | | |
|---|---|---|---|---|
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 103 | ಸಾಧಾರಣ | CO |
| 3 | ಕವಿಕ, ಮೈಸೂರುರಸ್ತೆ | 98 | ತೃಪ್ತಿಕರ | CO |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 66 | ತೃಪ್ತಿಕರ | CO |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 66 | ತೃಪ್ತಿಕರ | CO |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 69 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 49 | ಉತ್ತಮ | CO |
| **(21.9.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 55 | ತೃಪ್ತಿಕರ | $PM_{10}$ |
| 9 | ಪೀಣ್ಯ | 68 | ತೃಪ್ತಿಕರ | $PM_{10}$ |
| 10 | ಬಿಟಿಎಂ ಲೇಔಟ್ | 62 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದ ಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 21.9.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 70 | Satisfactory | $PM_{10}$ |
| 2 | Jayanagar 5th Block, Shalini ground | 103 | Moderate | CO |
| 3 | KAVIKA, Mysore Road | 98 | Satisfactory | CO |

| | | | | |
|---|---|---|---|---|
| 4 | Rajeev Gandhi Institute of Chest Disease, NIMHANS, Hombegowda Nagar | 66 | Satisfactory | CO |
| 5 | HSR Layout, near Central Silkboard | 66 | Satisfactory | CO |
| 6 | City Railway Station, Magestic, Bengaluru | 69 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 49 | Good | CO |
| **(21.9.2021 at 10.05 AM)** | | | | |
| 8 | BWSSB, Kadabesanahalli | 55 | Satisfactory | $PM_{10}$ |
| 9 | Peenya | 68 | Satisfactory | $PM_{10}$ |
| 10 | BTM Layout | 62 | Satisfactory | CO |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |